ಆ) ಬರಪರಿಹಾರ ನಿಧಿಯಿಂದ 12 ಕೊಳವೆ ಬಾವಿಗಳನ್ನು ಕೊರೆದು, ಪೈಪ್‌ಲೈನ್ ಮತ್ತು ಪಂಪ್‌ಸೇಟ್‌ಗಳನ್ನು ಒಟ್ಟು ರೂ.19.00 ಲಕ್ಷಗಳ ಮೊತ್ತದಲ್ಲಿ ಅಳವಡಿಸಲಾಗಿದ್ದು, ಸದ್ಯದಲ್ಲೇ ಚಾಲನೆಗೊಳಿಸಲಾಗುವುದು. ಶಾಶ್ವತ ಕುಡಿಯುವ ನೀರು ಸರಬರಾಜು ಮಾಡಲು ಮಾರ್ಕಾಂಡೇಯ ನದಿಯಿಂದ ದಿನಂಪ್ರತಿ ತಲಾ 70 ಲೀಟರ್‌ನಂತೆ ನೀರು ಸರಬರಾಜು ಮಾಡಲು ಕೇಂದ್ರ ಸರ್ಕಾರದ UIDSSMT ಯೋಜನೆಯಡಿ ರೂ.1894.76 ಲಕ್ಷಗಳಿಗೆ ಜನವರಿ 2008ರಲ್ಲಿ ಆಡಳಿತಾತ್ಮಕ ಅನುಮೋದನೆಗೆ ದೊರೆತಿರುತ್ತದೆ. ನದಿ ಅಡ್ಡಲಾಗಿ ಬ್ಯಾರೇಜ್ ನಿರ್ಮಿಸಲು ಕ್ರಮ ಕೈಗೊಂಡಿದ್ದು ನೀರಿನ ಲಭ್ಯತೆ ಆಧರಿಸಿ ಯೋಜನೆಯನ್ನು ಕೈಗೊಳ್ಳಲಾಗುವುದು.

1072 ಶ್ರೀಮತಿ. ಅನಿತಾ ಕುಮಾರಸ್ವಾಮಿ (ಮಧುಗಿರಿ) : ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನರಚನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೇಮಾವತಿ ನಾಲೆಯಿಂದ ಮಧುಗಿರಿ ಪಟ್ಟಣಕ್ಕೆ ಕುಡಿಯುವ ನೀರಿನ ಪೂರೈಕೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕುಡಿಯುವ ನೀರಿನ ಪೂರೈಕೆಗಾಗಿ ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಹಾಗಿದ್ದಲ್ಲಿ, ಇದಕ್ಕಾಗಿ ಸರ್ಕಾರ ನಿಗಧಿಪಡಿಸಿರುವ ಅನುದಾನದ ಮೊತ್ತವೆಷ್ಟು ಮತ್ತು ಎಂದಿನಿಂದ ಕಾಮಗಾರಿ ಪ್ರಾರಂಭಿಸಲಾಗುವುದು?

ಶ್ರೀ ಎಸ್.ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನರಚನೆ ಸಚಿವರು) :

ಅ) ಹೌದು.

ಆ) ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಇ) ರೂ.1794.15 ಲಕ್ಷಗಳ ಯೋಜನೆಯನ್ನು ಸೆಪ್ಟಂಬರ್ 2005ರಲ್ಲಿ ಪ್ರಾರಂಭಿಸಲಾಗಿದ್ದು ಸೆಪ್ಟಂಬರ್ 2009ರಲ್ಲಿ ಚಾಲನೆಗೊಳಿಸಲು ಉದ್ದೇಶಿಸಲಾಗಿದೆ.